ಪ್ರಸ್ತಾವನೆಯನ್ನು ಕಳುಹಿಸಿ ಕೊಡಲಾಗಿತ್ತು. ಅಸಿಸ್ಟೆಂಟ್ ಕಮೀಷನರ್ ಕುಂದಾಪುರ ರವರು ಮೇ-99ರಲ್ಲಿ ಭೂಮಿಯ ಮೌಲ್ಯದ ಶೇಕಡ 25ರಷ್ಟು (ರೂ. 4,96,795-00) ಠೇವಣಿಯಿಡಲು ತಿಳಿಸಿದರು. ಅದೇ ಪ್ರಕಾರ ಈ ಠೇವಣಿ ಹಣವನ್ನು ಸೆಪ್ಟೆಂಬರ್ - 99ರಲ್ಲಿ ಪಾವತಿಸಲಾಯಿತು. 4(1) ಸೂಚನೆಯನ್ನು ಉಡುಪಿ ಜಿಲ್ಲಾಧಿಕಾರಿಯವರು ಉದಯವಾಣಿ ದಿನಪತ್ರಿಕೆಯಲ್ಲಿ ದಿನಾಂಕ3.1.2000 ರಲ್ಲಿ ಮೇಲೆ ತಿಳಿಸಿದ ಭೂಮಿಯ ಸ್ವಾಧೀನ ಪಡೆದುಕೊಳ್ಳಲು ಪ್ರಕಟಣೆ ಹೊರಡಿಸಿದರು. ಆದರೆ ಭೂ ಮಾಲೀಕರು ಭೂಮಿಯ ಸ್ವಾದೀನ ಪಡಿಸಿಕೊಳ್ಳುವ ಮೌಲ್ಯದ ಬಗ್ಗೆ ತಕರಾರನ್ನು ಎತ್ತಿರುತ್ತಾರೆ. ಈ ಬಗ್ಗೆ ಕುಂದಾಪುರದ ಅಸಿಸ್ಟೆಂಟ್ ಕಮೀಷನರ್‌ರವರನ್ನು ಕ.ವಿ.ಪ್ರ.ನಿ.ಸಿ.ಯು ಸಂಪರ್ಕಿಸಿ, ತಕರಾರಿನ ನಿವಾರಣೆಗಾಗಿ ಕ್ರಮ ಕೈಗೊಳ್ಳುತ್ತಿದೆ. ಈ ಭೂಮಿಯನ್ನು ಸ್ವಾಧೀನ ಪಡಿಸಿಕೊಂಡ ನಂತರ ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಲು ಸಾಧ್ಯವಾಗುತ್ತದೆ. ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಿದ ನಂತರ ಸುಮಾರು ಒಂದು ವರ್ಷದ ಅವಧಿಯಲ್ಲಿ ನಿರ್ಮಾಣ ಕಾರ್ಯಗಳನ್ನು ಪೂರ್ಣಗೊಳಿಸುವ ಗುರಿಯನ್ನು ಹೊಂದಲಾಗಿದೆ.

ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿರುವ ಕೆರೆಗಳು

4461 - ಶ್ರೀ ಜಯಪ್ರಕಾಶ್ ಹೆಗಡೆ ಕೆ. (ಬ್ರಹ್ಮಾವರ) : ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು?

ಆ) ಅವುಗಳು ಸುಸ್ಥಿತಿಯಲ್ಲಿವೆಯೇ? ಅವುಗಳ ಪೈಕಿ ನೀರಾವರಿ ಕೆರೆಗಳ ಸಂಖ್ಯೆ ಎಷ್ಟು?

ಇ) ದುಸ್ಥಿತಿಯಲ್ಲಿರುವ ಕೆರೆಗಳ ಅಭಿವೃದ್ಧಿ ಪಡಿಸುವಿಕೆಯ ಯೋಜನೆಗಳ ವಿವರಗಳೇನು? ಸದರಿ ಯೋಜನೆಗಳನ್ನು ಸದರಿ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆಯೇ?

ಈ) ಜಿಲ್ಲೆಗಳಲ್ಲಿ ದೇವಸ್ಥಾನಗಳ ಕೆರೆಗಳನ್ನು ಹೂಳು ತೆಗೆಯಿಸಿ ಆಯಾಯ ಪ್ರದೇಶದ ಊರುಗಳ ಬಾವಿಗಳಲ್ಲಿ ಅಂತರ್ಜಲ ಅಭಿವೃದ್ಧಿಗೆ ಅನುವು ಮಾಡಿಕೊಡಲು ಶೀಘ್ರ ಕ್ರಮಗಳನ್ನು ಸರ್ಕಾರ ತೆಗೆದುಕೊಳ್ಳುವುದೆ?

ಉ) ರಾಜ್ಯದಲ್ಲಿ ಕೆರೆಗಳ ಅಭಿವೃದ್ಧಿ ಯೋಜನೆಗಳು ಯಾವುವು?

ಶ್ರೀ ಎಸ್. ಕುಮಾರ್ ಬಂಗಾರಪ್ಪ (ಸಣ್ಣ ನೀರಾವರಿ ರಾಜ್ಯ ಸಚಿವರು) :

ಅ) ಸಣ್ಣ ನೀರಾವರಿಗೆ ಸಂಬಂಧಿಸಿದಂತೆ ಆರು ಕೆರೆಗಳು ಇರುತ್ತವೆ.

ಆ) ಅವುಗಳು ಪೂರ್ಣ ಪ್ರಮಾಣದ ಸುಸ್ಥಿತಿಯಲ್ಲಿಲ್ಲ. ಈ ಎಲ್ಲಾ ಕೆರೆಗಳು (ಆರು) ನೀರಾವರಿ ಕೆರೆಗಳಾಗಿರುತ್ತದೆ.

ಇ) ಸಾಧ್ಯವಿಲ್ಲ. ಮುಂದಿನ ವರ್ಷದ ಆಯವ್ಯಯದಲ್ಲಿ ಸೇರಿಸಿ ಕೈಗೆತ್ತಿಕೊಳ್ಳಲು ಪ್ರಯತ್ನಿಸಲಾಗುವುದು. ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಎರಡು ಕೆರೆಗಳ ಸಂಪೂರ್ಣ ಅಭಿವೃದ್ಧಿಯನ್ನು ಆಯವ್ಯಯದಲ್ಲಿ ಒದಗಿಸಿರುವ ಅನುದಾನದಲ್ಲಿ ಕೈಗೊಳ್ಳಲು ಯೋಜಿಸಲಾಗಿದೆ.

ಈ) ಜಿಲ್ಲೆಗಳಲ್ಲಿ ದೇವಸ್ಥಾನದ ಕೆರೆಗಳು (ಕಲ್ಯಾಣಿ) ನೀರಾವರಿ ಕೆರೆಗಳಲ್ಲದ ಕಾರಣ ಸಣ್ಣ ನೀರಾವರಿ ಇಲಾಖೆಯಿಂದ ಕ್ರಮ ಕೈಗೊಳ್ಳಲು ಸಾಧ್ಯವಿರುವುದಿಲ್ಲ.

ಉ) ರಾಜ್ಯದಲ್ಲಿ ಕೆರೆಗಳ ಅಭಿವೃದ್ಧಿಯನ್ನು ಕೆಳಕಂಡ ಯೋಜನೆಗಳಡಿಯಲ್ಲಿ ಕೈಗೆತ್ತಿಕೊಳ್ಳಲಾಗುತ್ತಿದೆ.

1. ಕೆರೆ ಕಲ್ಯಾಣ ಯೋಜನೆ
2. ಕೆರೆಗಳ ಆಧುನೀಕರಣ ಯೋಜನೆ
3. ರೈತರ ಪಾಲ್ಗೊಳ್ಳುವಿಕೆಯಿಂದ ಕೆರೆಗಳಲ್ಲಿ ಹೂಳೆತ್ತುವ ಕಾರ್ಯಕ್ರಮ
4. ವಿಶ್ವಬ್ಯಾಂಕ್ ನೆರವಿನ ಯೋಜನೆ

ಪಡಿತರ ಚೀಟಿಯ ವ್ಯವಸ್ಥೆಯಲ್ಲಿ ಬದಲಾವಣೆ

4462 - ಶ್ರೀ ಜಯಪ್ರಕಾಶ್ ಹೆಗಡೆ ಕೆ. (ಬ್ರಹ್ಮವರ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. *ಪಡಿತರ ಚೀಟಿ ವ್ಯವಸ್ಥೆಯನ್ನು ನಾಡ ಕಛೇರಿಯಿಂದ ತೆಗೆದು ತಹಸೀಲ್ದಾರರಿಗೆ ನೀಡಿರುವುದರಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*
2. *ಹಾಗಿದ್ದಲ್ಲಿ ಪುನಃ ನಾಡ ಕಛೇರಿಗೆ ನೀಡುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು?*

ಶ್ರೀ ಡಿ.ಬಿ. ಇನಾಂದಾರ್ (ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು) :

1. ಈ ಕಾರ್ಯವನ್ನು ಇಲ್ಲಿಯವರೆಗೆ ತಾಲ್ಲೂಕು ಕಛೇರಿಯಿಂದಲೇ ನಿರ್ವಹಿಸಲಾಗುತ್ತಿದೆ.
2. ಉದ್ಭವಿಸುವುದಿಲ್ಲ.

ಆಲಮಟ್ಟಿ ಜಲವಿದ್ಯುತ್ ಯೋಜನೆ ಒಪ್ಪಂದ

4463 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆಲಮಟ್ಟಿ ಜಲವಿದ್ಯುತ್ ಯೋಜನೆಯನ್ನು ಕೈಗೆತ್ತಿಕೊಳ್ಳಲು ಯಾವ ದೇಶದ ಯಾವ ಕಂಪನಿಯೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ?

ಆ) ಆಲಮಟ್ಟಿ ಜಲವಿದ್ಯುತ್ ಯೋಜನೆಯನ್ನು ಕೈಗೆತ್ತಿಕೊಳ್ಳಲು ಕರ್ನಾಟಕ ವಿದ್ಯುತ್ ನಿಗಮವು ಸಮರ್ಥವಿದ್ದರೂ ಸಹ ಬೇರೆ ಕಂಪನಿಯೊಂದಿಗೆ ಒಪ್ಪಂದಮಾಡಿಕೊಳ್ಳಲು ಕಾರಣವೇನು?